ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1298
ಸದಸ್ಯರ ಹೆಸರು	:	ಶ್ರೀ ಎಸ್.ಎಲ್.ಬೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	18.03.2020
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಬಡತನ ರೇಖೆಗಿಂತ ಕೆಳಗೆ ವಾಸಿಸುತ್ತಿರುವ ಪರಿಶಿಷ್ಟ ಜಾತಿಯ ಕುಟುಂಬಗಳ ಸಂಖ್ಯೆ ಎಷ್ಟು; ಮತ್ತು ಸದರಿ ಕುಟುಂಬಗಳ ಆರ್ಥಿಕ ಅಭಿವೃದ್ಧಿಗಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು; (ಜಿಲ್ಲಾವಾರು ಮಾಹಿತಿ ನೀಡುವುದು)	ಬಡತನ ರೇಖೆಯನ್ನು ನಿರ್ಧರಿಸುವ ಮಾನದಂಡಗಳ ಬಗ್ಗೆ ಅಧಿಕೃತವಾಗಿ ನಿಗದಿಪಡಿಸಿರುವುದಿಲ್ಲ. ಆದ್ದರಿಂದ, ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ನಿರ್ದಿಷ್ಟ ಮಾಹಿತಿ ಲಭ್ಯವಿರುವುದಿಲ್ಲ. ಪರಿಶಿಷ್ಟ ಜಾತಿ 21,78,501 ಕುಟುಂಬಗಳಿಗೆ ಬಿಪಿಎಲ್‌ರೇಷನ್ ಕಾರ್ಡ್‌ಗಳನ್ನು ನೀಡಿರುತ್ತಾರೆ. ನಿಗದಿತ ಆದಾಯ ಮಿತಿಯ ವ್ಯಾಪ್ತಿಗೊಳಪಟ್ಟ ಪರಿಶಿಷ್ಟ ಜಾತಿಯವರ ಅಭಿವೃದ್ಧಿಗಾಗಿ ಸಮಾಜ ಕಲ್ಯಾಣ ಇಲಾಖೆ ಮತ್ತು ಇತರೆ ಅಭಿವೃದ್ಧಿ ಇಲಾಖೆಗಳಿಂದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಕುಟುಂಬಗಳ ಸಮಗ್ರ ಅಭಿವೃದ್ಧಿಗಾಗಿ ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ ಅಧಿನಿಯಮ 2013 ರನ್ನು ಜಾರಿಗೆ ತಂದಿದ್ದು, ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಉಪ ಯೋಜನೆಯಡಿಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. 2019-20ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯವರ ಅಭಿವೃದ್ಧಿಗಾಗಿ ಎಸ್.ಸಿ.ಎಸ್.ಪಿ.ಯಡಿಯಲ್ಲಿ ರೂ.19,542 ಕೋಟಿಗಳನ್ನು ಒದಗಿಸಲಾಗಿದೆ.
ಆ)	ಹಾಗಿದ್ದಲ್ಲಿ, ಸದರಿ ಕುಟುಂಬಗಳ ಆರ್ಥಿಕ ಪ್ರಗತಿಯ ಶ್ರೇಣಿ ಎಷ್ಟು; ಸೂಕ್ತ ಬಡ ಕುಟುಂಬಗಳಿಗೆ ಸರ್ಕಾರದ ವತಿಯಿಂದ ಯೋಜನೆಗಳು ನ್ಯಾಯಯುತವಾಗಿ ತಲುಪಿದೆಯೇ; ಸೇ.,	
ಇ)	ಬಡತನ ರೇಖೆಯನ್ನು ಅಳೆಯಲು ಸರ್ಕಾರವು ಕೈಗೊಳ್ಳುವ ಮಾನದಂಡಗಳೇನು; ಬಡತನ ರೇಖೆಯನ್ನು ಗುರುತಿಸಿದ ನಂತರ ಸದರಿ ಕುಟುಂಬಗಳಿಗೆ ಎಷ್ಟು ಅವಧಿಯಲ್ಲಿ ಯೋಜನೆಗಳು ತಲುಪುತ್ತವೆ; ಈ ಯೋಜನೆಯನ್ನು ತಲುಪಿಸುವಲ್ಲಿ ತಡವಾಗದೇ ಇರುವ ಹಾಗೆ ಸರ್ಕಾರ ಕೈಗೊಂಡ ಕ್ರಮಗಳೇನು;	ಬಡತನ ರೇಖೆಯನ್ನು ಅಳೆಯಲು ನಿರ್ದಿಷ್ಟ ಮಾನದಂಡಗಳನ್ನು ನಿಗದಿಪಡಿಸಿರುವುದಿಲ್ಲ.

ಈ)	ಮಹಿಳಾ ಫಲಾನುಭವಿಗಳು ಹಾಗೂ ವಿಕಲಚೇತನರಿಗೆ ಸರಿಯಾದ ಸಮಯಕ್ಕೆ ಮತ್ತು ಅತೀ ಬೇಗ ಯೋಜನೆಗಳು ತಲುಪುತ್ತಿವೆಯೇ; ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು; ಹಾಗಿದ್ದಲ್ಲಿ ಪ್ರಗತಿ ಪ್ರಮಾಣ ಎಷ್ಟು?	ಪರಿಶಿಷ್ಟ ಜಾತಿಯ ಮಹಿಳೆಯರ ವಿಕಲಚೇತನರ ಅಭಿವೃದ್ಧಿಗಾಗಿ ಎಸ್.ಸಿ.ಎಸ್.ಪಿ ಉಪ ಯೋಜನೆಯಡಿಯಲ್ಲಿ ರೂ.962.49 ಕೋಟಿಗಳನ್ನು 2019-20ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಹಂಚಿಕೆ ಮಾಡಲಾಗಿದ್ದು, ಕಾರ್ಯಕ್ರಮಗಳನ್ನು ಅನುಷ್ಠಾನಗೊಳಸಲಾಗುತ್ತಿದೆ. ಫೆಬ್ರವರಿ-2020 ಅಂತ್ಯಕ್ಕೆ ರೂ.547.47 ಕೋಟಿಗಳನ್ನು ವೆಚ್ಚ ಮಾಡಲಾಗಿದೆ.

ಸಂಖ್ಯೆ: ಸಕಇ 113 ಸಮನ್ವಯ 2020

(ಗೋವಿಂದ ಎಂ ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ
ಹಾಗೂ ಸಮಾಜಕಲ್ಯಾಣ ಸಚಿವರು